ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಬಿಬಿಎಂಪಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 4/7/2020

**ಖಡಕ್ ಎಚ್ಚರಿಕೆ** 34 ಬಿಬಿಎಂಪಿ ಸದಸ್ಯರ ವಿರುದ್ಧ ಹೈಕೋರ್ಟ್ ಮೌಖಿಕ ಸೂಚನೆ

# ಆಸ್ತಿ ವಿವರ ನೀಡದವರು ಅನರ್ಹ: ಎಚ್ಚರಿಕೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಿಯಮದಂತೆ ಪ್ರತಿ ವರ್ಷ ತಮ್ಮ ಆಸ್ತಿ ಹಾಗೂ ಸಾಲದ ವಿವರಗಳನ್ನು ನೀಡದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಬಿಬಿಎಂಪಿ) ಸದಸ್ಯರನ್ನು ಅನರ್ಹಗೊಳಿಸಲಾಗುವುದು ಎಂದು ಹೈಕೋರ್ಟ್ ಶುಕ್ರವಾರ ಮೌಖಿಕ ಎಚ್ಚರಿಕೆ ನೀಡಿದೆ.

ಪಾಲಿಕೆ 34 ಸದಸ್ಯರು ತಮ್ಮ ಹಾಗೂ ಕುಟುಂಬದ ಸದಸ್ಯರ ಆಸ್ತಿ ಮತ್ತು ಸಾಲದ ವಿವರಗಳನ್ನು ಮೇಯರ್‌ಗೆ ಒದಗಿಸಿಲ್ಲ ಎಂದು ಆರೋಪಿಸಿ ಕೆ. ಅನಿಲ್‌ಕುಮಾರ್ ಶೆಟ್ಟಿ ಎಂಬುವರು ಸಲ್ಲಿಸಿರುವ ಅರ್ಜಿಯನ್ನು ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಶುಕ್ರವಾರ ವಿಚಾರಣೆ ನಡೆಸಿತು.



ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲ ಅಜ್ಜರ್ ಮೀರ್, ಪಾಲಿಕೆಯ 34 ಸದಸ್ಯರು ತಮ್ಮ ಆಸ್ತಿ ಹಾಗೂ ಸಾಲದ ವಿವರ ಸಲ್ಲಿಸಿಲ್ಲ ಎಂದು ತಿಳಿಸಿದರು.

ಅದನ್ನು ಗಂಭೀರವಾಗಿ ಪರಿಗಣಿಸಿದ ನ್ಯಾಯಪೀಠ, ಕರ್ನಾಟಕ ಮುನ್ಸಿಪಲ್ ಕಾರ್ಪೊರೇಷನ್ ಕಾಯ್ದೆಯ ಸೆಕ್ಷನ್ 19ರ ಪ್ರಕಾರ ಪಾಲಿಕೆಯ ಸದಸ್ಯರು ಪ್ರತಿ ವರ್ಷದ ತಮ್ಮ ಹಾಗೂ ಕುಟುಂಬ ಸದಸ್ಯರ ಆಸ್ತಿ ಮತ್ತು ಸಾಲದ ವಿವರಗಳನ್ನು ಒದಗಿಸುವುದು ಕಡ್ಡಾಯವಾಗಿದೆ. ಆದರೆ, ಈ ನಿಯಮವನ್ನು ಕಟ್ಟುನಿಟ್ಟಾಗಿ ಪಾಲಿಸಲು ಬಿಬಿಎಂಪಿಯ ಕೆಲ ಸದಸ್ಯರು ವಿಫಲರಾಗಿದ್ದಾರೆ. ಅಂತಹವರನ್ನು ಪಾಲಿಕೆಯ ಸದಸ್ಯ ಸ್ಥಾನದಿಂದ ವಜಾಗೊಳಿಸಲಾಗುವುದು ಎಂದು ನುಡಿಯಿತು.

ಅಲ್ಲದೆ, ಅರ್ಜಿಯಲ್ಲಿ ಪ್ರತಿವಾದಿಗಳಾಗಿರುವ 34 ಬಿಬಿಎಂಪಿ ಸದಸ್ಯರು ಆಸ್ತಿ ವಿವರ ನೀಡಿರುವ ಕುರಿತ ದಾಖಲೆಗಳು ಹಾಗೂ ವಿವರಣೆಗಳನ್ನು ಒಂದು ವಾರದೊಳಗೆ ಬಿಬಿಎಂಪಿ ಪರ ವಕೀಲರು ನ್ಯಾಯಾಲಯಕ್ಕೆ ನೀಡಬೇಕು. ಇಲ್ಲವಾದರೆ ಆಸ್ತಿ ವಿವರ ಸಲ್ಲಿಸದ ಪಾಲಿಕೆಯ ಸದಸ್ಯರನ್ನು ಅನರ್ಹ ಮಾಡಲು ತೀರ್ಪು ಹೊರಡಿಸಲಾಗುವುದು ಎಂದು ಎಚ್ಚರಿಕೆ ನೀಡಿದ ನ್ಯಾಯಪೀಠ ವಿಚಾರಣೆಯನ್ನು ಮುಂದೂಡಿತು.

**ಪ್ರಕರಣವೇನು?:** ಪಾಲಿಕೆಯ 34 ಸದಸ್ಯರು ತಮ್ಮ ಹಾಗೂ ತಮ್ಮ ಕುಟುಂಬದ ಸದಸ್ಯರ ಆಸ್ತಿ ಹಾಗೂ ಸಾಲದ ವಿವರಗಳನ್ನು ಮೇಯರ್‌ಗೆ ಒದಗಿಸಿಲ್ಲ. ಈ ನಿಯಮ ಪಾಲಿಸದ ಸದಸ್ಯರು ಆ ಸ್ಥಾನದಲ್ಲಿ ಮುಂದುವರಿಯಲು ಅನರ್ಹರಾಗುತ್ತಾರೆ. ಆಸ್ತಿ ವಿವರ ಸಲ್ಲಿಸದ ಸದಸ್ಯರನ್ನು ಅವರ ಸ್ಥಾನದಲ್ಲಿ ಮುಂದುವರಿಸದಂತೆ ಕೋರಿ ಸಲ್ಲಿಸಿದ್ದ ಮನವಿಯನ್ನು ಬಿಬಿಎಂಪಿ ಪ್ರಾದೇಶಿಕ ಆಯುಕ್ತರು ಪರಿಗಣಿಸಿಲ್ಲ ಎಂದು ಅರ್ಜಿದಾರರ ಆಕ್ಷೇಪಿಸಿದ್ದಾರೆ.